ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿ/ಸಿಬ್ಬಂದಿ-3/ಪಾಲಿಸಿ/ಹೊ.ಸಂ.ಕು/ಹೆ.ವಿ.ಕು/2021-22

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ
18ನೇ ಅಡ್ಡರಸ್ತೆ, ಮಲ್ಲೇಶ್ವರ
ಬೆಂಗಳೂರು-560012
ದಿನಾಂಕ: 20-07-2022.

## -: ಪ್ರಕಟಣೆ :-

ವಿಷಯ:- 2022-23ನೇ ಶೈಕ್ಷಣಿಕ ಸಾಲಿನಿಂದ ರಾಜ್ಯದಲ್ಲಿನ ಖಾಸಗಿ ಅನುದಾನಿತ / ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ಹೊಸ ಭಾಷೆ / ಸಂಯೋಜನೆ ಹಾಗೂ ಹೆಚ್ಚುವರಿ ವಿಭಾಗಗಳನ್ನು ಪ್ರಾರಂಭಿಸಲು ಆಸಕ್ತಿ ಹೊಂದಿರುವ ಕಾಲೇಜಿನ ಆಡಳಿತ ಮಂಡಳಿ / ಪ್ರಾಂಶುಪಾಲರಿಂದ ಅರ್ಜಿಗಳನ್ನು ಆಹ್ವಾನಿಸುವ ದಿನಾಂಕವನ್ನು ವಿಸ್ತರಿಸುವ ಕುರಿತು.

ಉಲ್ಲೇಖ:-
1) ಕರ್ನಾಟಕ ಪದವಿ ಪೂರ್ವ ಶಿಕ್ಷಣ(ಶೈಕ್ಷಣಿಕ, ನೋಂದಣಿ, ಆಡಳಿತ ಮತ್ತು ಸಹಾಯಾನುದಾನ ಇತರೆ) ನಿಯಮಗಳು 2006.
2) ಸರ್ಕಾರದ ಪತ್ರ ಸಂಖ್ಯೆ: ಇಡಿ 90 ಎಸ್‌ಹೆಚ್‌ಹೆಚ್ 2019 ದಿ:18-11-2019.
3) ಸರ್ಕಾರದ ಪತ್ರ ಸಂಖ್ಯೆ: ಇಡಿ 195 ಡಿಜಿಡಿ 2017 ದಿನಾಂಕ:20/03/2018.
4) ಈ ಕಛೇರಿ ಸಮ ಸುತ್ತೋಲೆ ಸಂಖ್ಯೆ ದಿನಾಂಕ: 16-05-2022, 07-06-2022, 05-07-2022
5) ಈ ಕಛೇರಿ ಸುತ್ತೋಲೆ ಸಂಖ್ಯೆ: ಪಪೂಶಿ/ಆ-1/ಪಾ(ಆರ್&ಜಿ)/80-100/2021-22 ದಿ:31-05-2022.

***

2022-23ನೇ ಶೈಕ್ಷಣಿಕ ಸಾಲಿನಿಂದ ರಾಜ್ಯದಲ್ಲಿನ ಖಾಸಗಿ ಅನುದಾನಿತ / ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ಹೊಸ ಭಾಷೆ / ಸಂಯೋಜನೆ ಹಾಗೂ ಹೆಚ್ಚುವರಿ ವಿಭಾಗಗಳನ್ನು ಪ್ರಾರಂಭಿಸಲು ಆಸಕ್ತಿ ಹೊಂದಿರುವ ಕಾಲೇಜಿನ ಆಡಳಿತ ಮಂಡಳಿ / ಪ್ರಾಂಶುಪಾಲರಿಂದ ಅರ್ಜಿಗಳನ್ನು ಸಲ್ಲಿಸಲು ಉಲ್ಲೇಖ 04 ರಿಂದ 06ರ ಪತ್ರದಲ್ಲಿ ಅವಕಾಶ ಕಲ್ಪಿಸಲಾಗಿತ್ತು.

ವಿವಿಧ ಪದವಿ ಪೂರ್ವ ಕಾಲೇಜಿನ ಆಡಳಿತ ಮಂಡಳಿಗಳು / ಪ್ರಾಚಾರ್ಯರ ಕೋರಿಕೆ, ವಿದ್ಯಾರ್ಥಿಗಳ ಮತ್ತು ಪೋಷಕರ ಕೋರಿಕೆ ಹಾಗೂ ಸಿಬಿಎಸ್‌ಇ ಫಲಿತಾಂಶ ಪ್ರಕಟವಾಗಿರುವ ಹಿನ್ನೆಲೆಯಲ್ಲಿ ಸದರಿ ಅರ್ಜಿ ಸಲ್ಲಿಸುವ ದಿನಾಂಕವನ್ನು **20-07-2022 ರಿಂದ 30-07-2022ರವರೆಗೆ** ವಿಸ್ತರಿಸಲಾಗಿದೆ. ಪರಿಷ್ಕೃತ ವೇಳಾಪಟ್ಟಿಯನ್ನು ಇದರೊಂದಿಗೆ ಲಗತ್ತಿಸಿದೆ. ಉಳಿದಂತೆ ಇನ್ನಿತರ ನಿಯಮಗಳು ಉಲ್ಲೇಖ 04ರಲ್ಲಿರುವಂತೆ ಯಥಾವತ್ತಾಗಿ ಮುಂದುವರೆಯುತ್ತದೆ.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ರವರಿಗೆ,

ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ ಹಾಗೂ ಜಿಲ್ಲಾ ವ್ಯಾಪ್ತಿಯಲ್ಲಿ ಈ ಕುರಿತು ಹೆಚ್ಚಿನ ಪ್ರಚಾರ ಕೈಗೊಳ್ಳತಕ್ಕದ್ದು.

ಪ್ರತಿಗಳು ಮಾಹಿತಿಗಾಗಿ :-

1. ಮಾನ್ಯ ನಿರ್ದೇಶಕರ ಆಪ್ತಶಾಖೆ.
2. ಜಂಟಿ ನಿರ್ದೇಶಕರ / ಉಪ ನಿರ್ದೇಶಕರ (ಮಾ&ಅ) ಆಪ್ತಶಾಖೆ.
3. ಆಡಳಿತ-1&2ರ ಅಧಿಕಾರಿ / ಸಿಬ್ಬಂದಿಗಳಿಗೆ
4. ಹೆಚ್ಚುವರಿ ಪ್ರತಿ.

ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿ/ಆಡಳಿತ-1/ಪಾಲಿಸಿ(ಆರ್&ಜಿ)/ಹೊ.ಸಂ.ವಿ/2021-22

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರ,
ಬೆಂಗಳೂರು-560012.
ದಿನಾಂಕ: 20-07-2022.

## ವೇಳಾಪಟ್ಟಿ

2022-23ನೇ ಶೈಕ್ಷಣಿಕ ಸಾಲಿನಿಂದ ರಾಜ್ಯದಲ್ಲಿನ ಖಾಸಗಿ ಅನುದಾನಿತ / ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ಹೊಸ ಭಾಷೆ, ಹೊಸ ಸಂಯೋಜನೆ ಹಾಗೂ ಹೆಚ್ಚುವರಿ ವಿಭಾಗಗಳನ್ನು ಪ್ರಾರಂಭಿಸಲು ಆಸಕ್ತಿ ಹೊಂದಿರುವ ಕಾಲೇಜಿನ ಆಡಳಿತ ಮಂಡಳಿ / ಪ್ರಾಂಶುಪಾಲರಿಂದ ಶಿಕ್ಷಣ ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಕುರಿತು (ಬ್ಯಾಚ್-05).

| ಕ್ರ.ಸಂ | ಹಲವು ಹಂತಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳು | ದಿನಾಂಕ |
|---|---|---|
| 01 | ಇಲಾಖಾ ವೆಬ್-ಸೈಟ್ www.pue.karnataka.gov.in ಇಲ್ಲಿ 2022-23ನೇ ಸಾಲಿಗೆ ಹೊಸ ಭಾಷೆ / ಸಂಯೋಜನೆ ಮತ್ತು ಹೆಚ್ಚುವರಿ ವಿಭಾಗಕ್ಕೆ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕ (ಐದನೇ ಬಾರಿಗೆ ವಿಸ್ತರಿಸಿದ ದಿನಾಂಕ) | 20-07-2022 ಮಧ್ಯಾಹ್ನ 12:00 ರಿಂದ 30-07-2022 ಸಂಜೆ 05:30ರವರೆಗೆ |
| 03 | ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ವಿವಿಧ ಕಾಲೇಜಿನ ವಿವರದ ಪಟ್ಟಿಯನ್ನು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರಿಗೆ ಕಳುಹಿಸುವ ದಿನಾಂಕ | 01-08-2022 |
| 04 | ಕಾಲೇಜಿನ ಪ್ರಾಂಶುಪಾಲರು ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನಿಗದಿತ ಚೆಕ್‌ಲಿಸ್ಟ್‌ನಲ್ಲಿ(ಫಾರಂ-6) ಪೂರಕ ದಾಖಲೆ / ಮಾಹಿತಿಗಳೊಂದಿಗೆ ಜಿಲ್ಲಾ ಉಪ ನಿರ್ದೇಶಕರ ಕಛೇರಿಗೆ ಪ್ರಸ್ತಾವನೆ ಸಲ್ಲಿಸಲು ಕೊನೆಯ ದಿನಾಂಕ | 01-08-2022 |
| 05 | ಜಿಲ್ಲಾ ಉಪ ನಿರ್ದೇಶಕರು ಪ್ರಸ್ತಾವನೆಗಳನ್ನು ಪರಿಶೀಲಿಸಿ ಅರ್ಜಿಗಳ ಸಂಖ್ಯೆಯನ್ನು ಅನುಸರಿಸಿ ಒಂದು ವೇಳಾಪಟ್ಟಿಯನ್ನು ತಯಾರಿಸಿ, ಸ್ಥಳ ಪರಿಶೀಲನೆ ನಡೆಸಿ, ಪ್ರಸ್ತಾವನೆಗಳನ್ನು ಸ್ಪಷ್ಟ ಅಭಿಪ್ರಾಯದೊಂದಿಗೆ ನಿರ್ದೇಶನಾಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 05-08-2022 |
| 06 | ಜಿಲ್ಲಾ ಉಪ ನಿರ್ದೇಶಕರುಗಳಿಂದ ಸಲ್ಲಿಕೆಯಾದ ಪ್ರಸ್ತಾವನೆಗಳನ್ನು ನಿರ್ದೇಶನಾಲಯವು ಪರಿಶೀಲಿಸಿ ಇತ್ಯರ್ಥ ಪಡಿಸುವ ಅಂತಿಮ ದಿನಾಂಕ | 15-08-2022 |

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ವಿಶೇಷ ಸೂಚನೆ: ಕ್ರಮ ಸಂಖ್ಯೆ 02ರಲ್ಲಿ ನಿಗದಿಪಡಿಸಿರುವ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ.

ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ,
ಮಲ್ಲೇಶ್ವರ, ಬೆಂಗಳೂರು-12.

ಸಂಖ್ಯೆ:ಪಪೂಶಿ/ಅನಳಿತ-1/ಪಾಲಿಸಿ(ಆರ್&ಜಿ)/ಹೊ.ಸಂ.ವಿ/2021-22 ದಿನಾಂಕ:20-07-2022.

## -: ಪ್ರಕಟಣೆ :-

ಪದವಿ ಪೂರ್ವ ಶಿಕ್ಷಣ ನಿಯಮಗಳು 2006ರ ನಿಯಮ 11 (3) & (4) ರನ್ವಯ ರಾಜ್ಯದಲ್ಲಿ ಪ್ರಸ್ತುತ ನಡೆಯುತ್ತಿರುವ ಖಾಸಗಿ ಅನುದಾನಿತ / ಶಾಶ್ವತ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ಹೊಸ ಭಾಷೆ / ಸಂಯೋಜನೆ ಹಾಗೂ ಹೆಚ್ಚುವರಿ ವಿಭಾಗಗಳನ್ನು 2022-23ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಇಚ್ಛಿಸುವ ಖಾಸಗಿ ಅನುದಾನಿತ / ಶಾಶ್ವತ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳು ಅರ್ಜಿಗಳನ್ನು ಇಲಾಖೆಯ ವೆಬ್-ಸೈಟ್ **www.pue.karnataka.gov.in** ಇಲ್ಲಿ **"2022-23 new combination / language and addl section application"** ಈ ಲಿಂಕನ್ನು ಬಳಸಿ ಅರ್ಜಿಯನ್ನು **ದಿನಾಂಕ: 20-07-2022 ರಿಂದ 30-07-2022** ಒಳಗೆ ಸಲ್ಲಿಸಲು ಮತ್ತೊಮ್ಮೆ ಅವಕಾಶ ಕಲ್ಪಿಸಿ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಲಾಗಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.